ಕರ್ನಾಟಕ ವಿಧಾನ ಸಭೆ

KARNATAKA LEGISLATIVE ASSEMBLY

ಬುಧವಾರ ೨೭ನೇ ಜನವರಿ ೧೯೮೫, ಮಾಘ ೭, ೧೯೦೬ ಶಕ.

ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ
ಬೆಳಿಗ್ಗೆ ೧೧-೦೦ ಗಂಟೆಗೆ ಸಮಾವೇಶಗೊಂಡಿತು

[ಅಧ್ಯಕ್ಷರು, (ಶ್ರೀ ಬಿ. ಜಿ. ಬಣಕಾರ್) ಅವರು ಪೀಠವನ್ನು ಅಲಂಕರಿಸಿದರು]

ಸಂತಾಪ ಸೂಚನೆ

ಅಧ್ಯಕ್ಷರು.—ಮಾಜಿ ಶಾಸಕರಾದ ಶ್ರೀ ಕೆ. ವೆಂಕಟರಮಣಗೌಡ ಅವರು ದಿನಾಂಕ ೨೧-೧-೧೯೮೫ ರಂದು ನಿಧನರಾದರೆಂದು ಈ ಸಭೆಗೆ ತಿಳಿಸಲು ವಿಷಾದಿಸುತ್ತೇನೆ. ಶ್ರೀಯುತರು ಹಿಂದುಳಿದ ವರ್ಗಗಳ ಏಳಿಗೆಗಾಗಿ ಬಹು ವಿಧವಾಗಿ ಶ್ರಮಿಸಿದ್ದರು. ಇವರು ೧೯೫೨ ರಲ್ಲಿ ಮದ್ರಾಸ್ ವಿಧಾನ ಸಭೆಗೆ ಆಯ್ಕೆಯಾಗಿದ್ದರು. ದಿನಾಂಕ ೨೫-೩-೧೯೫೬ ರಲ್ಲಿ ರಾಜ್ಯ ಪುನರ್ವಿಂಗಡಣಾ ಸಮಯದಲ್ಲಿ ಕರ್ನಾಟಕ ವಿಧಾನ ಸಭೆಗೆ ವರ್ಗಾಯಿಸಲ್ಪಟ್ಟರು. ೧೯೫೭ ರಿಂದ ೧೯೬೭ರ ವರೆಗೆ ೨ನೇ ಮತ್ತು ೩ನೇ ವಿಧಾನ ಸಭೆಗೆ ಆಯ್ಕೆಯಾಗಿ ತಮ್ಮ ಸೇವೆಯನ್ನು ಸಲ್ಲಿಸಿದ್ದಾರೆ. ನಿಧನ ಹೊಂದಿದ ಸದಸ್ಯರ ಗೌರವದ ಅಂಗವಾಗಿ ಮಾನ್ಯ ಸದಸ್ಯರೆಲ್ಲರೂ ಒಂದು ನಿಮಿಷಗಳ ಕಾಲ ಎದ್ದುನಿಂತು ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಸಭೆಯ ಸದಸ್ಯರೆಲ್ಲರೂ ಎದ್ದುನಿಂತು ಒಂದು ನಿಮಿಷ ಮೌನ ಆಚರಿಸಿದರು)

ಈ ಸಭೆಯಲ್ಲಿ-ಅಂಗೀಕರಿಸಿದ ಸಂತಾಪ ಸೂಚನಾ ನಿರ್ಣಯವನ್ನು ಅಗಲಿದ ಸದಸ್ಯರ ಕುಟುಂಬದ ವರಿಗೆ ಕಳುಹಿಸಿ ಕೊಡಲಾಗುವುದು.

ಚುಕ್ಕೆಗುರುತಿನ ಪ್ರಶ್ನೆಗಳಿಗೆ ನೀಡಲಾದ ಬಾಯಿಮಾತಿನ ಉತ್ತರಗಳು

೧೨೫ ಮುಂದೆ ಪ್ರಶ್ನೋತ್ತರ ಶ್ರೀ ಕೆ. ಹೆಚ್. ಶ್ರೀನಿವಾಸ್‌ರವರು ತಮ್ಮ ಪ್ರಶ್ನೆಯನ್ನು ಕೇಳಬಹುದು.

ಶಿವಮೊಗ್ಗ ನಗರದ ನೀರು ಸರಬರಾಜು ಯೋಜನೆ

೩೪೩. ಶ್ರೀ ಕೆ. ಹೆಚ್. ಶ್ರೀನಿವಾಸ್ (ಶಿವಮೊಗ್ಗ).—ಮಾನ್ಯ ನಗರಾಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

(ಅ) ಶಿವಮೊಗ್ಗ ನಗರವು ಕ್ಷಿಪ್ರಗತಿಯಿಂದ ಬೆಳೆಯುತ್ತಿದ್ದು ಹಾಲಿ ಇರುವ ನೀರು ಸರಬರಾಜು ವ್ಯವಸ್ಥೆ ಸಾಲದಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ,

(ಆ) ಹಾಗಿದ್ದಲ್ಲಿ ಶಿವಮೊಗ್ಗ ನೀರು ಸರಬರಾಜು ಯೋಜನೆಯನ್ನು ಉತ್ತಮಗೊಳಿಸಿ ಹೆಚ್ಚಿನ ಪ್ರಮಾಣದಲ್ಲಿ ನೀರು ಸರಬರಾಜು ಮಾಡಲು ಸರ್ಕಾರದವರು ಕೈಗೊಳ್ಳಲು ಉದ್ದೇಶಿಸಿರುವ ಕ್ರಮಗಳೇನು ?

ಶ್ರೀ ಎಂ. ಚಂದ್ರಶೇಖರ್ (ನಗರಾಭಿವೃದ್ಧಿ ಸಚಿವರು).—

(ಅ) ಬಂದಿದೆ.